**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ/513/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:26-05-2018.

**-:: ಸುತ್ತೋಲೆ ::-**

**ವಿಷಯ:** 2018-19ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಸ್ವೀಕರಿಸುವ ಅಂತಿಮ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/513/ಎಸಿಎಂ(2)/2017-18, ದಿ:05-05-2018.

-00000000-

2018-19ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಎಸ್.ಎಸ್.ಎಲ್.ಸಿ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರವೇಶ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ **ದಿನಾಂಕವನ್ನು 28-05-2018** ಎಂದು ನಿಗಧಿಪಡಿಸಿ ಸಂಬಂಧಪಟ್ಟ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ "ದಾಖಲಾತಿ ಪರಿಶೀಲನಾ ಕೇಂದ್ರ"ದಲ್ಲಿ ಸಲ್ಲಿಸಲು ಸೂಚಿಸಲಾಗಿತ್ತು. ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ತಾತ್ಕಾಲಿಕ ವೇಳಾಪಟ್ಟಿಯನ್ನು ಸಹ ಪ್ರಕಟಿಸಲಾಗಿತ್ತು.

ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಹಾಗೂ ಭರ್ತಿ ಮಾಡಿದ ಅರ್ಜಿಯನ್ನು ಸ್ವೀಕರಿಸಲು ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

**ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ www.dte.kar.nic.in ವೆಬ್‌ಸೈಟ್‌ನಿಂದ ಪಡೆಯಲು, ಭರ್ತಿ ಮಾಡಿದ ಅರ್ಜಿ ಹಾಗೂ ಅರ್ಜಿ ನೋಂದಣಿ ಶುಲ್ಕವನ್ನು ಸಮೀಪವಿರುವ ಯಾವುದಾದರು ಒಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ದಲ್ಲಿ (ಸಾಮಾನ್ಯ/2ಎ/2ಬಿ/3ಎ/3ಬಿ = ₹ 100/- & ಪ.ಜಾ/ಪ.ಪಂ/ ಪ್ರವರ್ಗ-1 = ₹ 50/-) ನಗದು ರೂಪದಲ್ಲಿ ಪಾವತಿಸಿ, ಮೂಲ ದಾಖಲೆಗಳ ಪರಿಶೀಲನೆಯೊಂದಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವಿಸ್ತರಿಸಲಾದ ಅಂತಿಮ ದಿನಾಂಕ: 09-06-2018ರ ಸಂಜೆ 5:30 ಗಂಟೆಯವರೆಗೆ.**

2018-19ನೇ ಸಾಲಿನ ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ಪರಿಷ್ಕೃತ ವೇಳಾಪಟ್ಟಿಯನ್ನು ಈ ಸುತ್ತೋಲೆಯಲ್ಲಿ ಲಗತ್ತಿಸಲಾಗಿದೆ. ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಅಭ್ಯರ್ಥಿಗಳ ಮತ್ತು ಪಾಲಕರ ಗಮನಕ್ಕೆ ತರುವುದು.

**ವಿ.ಸೂ:- ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ ಎಂಬ ಮಾಹಿತಿಯನ್ನು ವಿದ್ಯಾರ್ಥಿಗಳು ಹಾಗೂ ಪೋಷಕರುಗಳ ಗಮನಕ್ಕೆ ತರಲಾಗಿದೆ.**

**ನಿರ್ದೇಶಕರು**

26/05

ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ - ಸದರಿ ಸುತ್ತೋಲೆಯನ್ನು ಹಾಗೂ ಪರಿಷ್ಕೃತ ವೇಳಾಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸ್ಥಳೀಯ ದಿನಪತ್ರಿಕೆಯಲ್ಲಿ ಜಾಹಿರಾತು ನೀಡಲು ಸೂಚಿಸಲಾಗಿದೆ.

ಪ್ರತಿ:

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಜಂಟಿ ನಿರ್ದೇಶಕರು(ಪ), ತಾಂತ್ರಿಕ ಪರೀಕ್ಷಾ ಮಂಡಳಿ
3. ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ
4. ಪಿಆರ್‌ಓ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
5. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪತ್ರಿಕಾ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ನಿರ್ದೇಶಕರ ಆಪ್ತಶಾಖೆಗೆ.